# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಎಚ್. ರಸ್ತೆ, ತುಮಕೂರು – 572 103

## ಅಧಿಸೂಚನೆ

ವಿಷಯ: ತುಮಕೂರು ವಿಶ್ವವಿದ್ಯಾನಿಲಯ ಸ್ನಾತಕೋತ್ತರ ಮಟ್ಟದಲ್ಲಿ ಸ್ಕೂಲ್ ಪರಿಕಲ್ಪನೆಗಳನ್ನು ಅನುಷ್ಠಾನಗೊಳಿಸುವ ಬಗ್ಗೆ.

ಉಲ್ಲೇಖ:1. ವಿದ್ಯಾವಿಷಯಕ ಮತ್ತು ಸಿಂಡಿಕೇಟ್ ಸಭೆಗಳ ನಿರ್ಣಯ ದಿನಾಂಕ:04.09.2024

2. ಅಧ್ಯಕ್ಷರು, ಸ್ನಾತಕೋತ್ತರ ಕನ್ನಡ ಮತ್ತು ಇಂಗ್ಲೀಷ್ ಅಧ್ಯಯನ ಮತ್ತು ಸಂಶೋಧನಾ ವಿಭಾಗಗಳು, ಇವರ ಮನವಿ ಪತ್ರ ದಿನಾಂಕ:14.10.2024

3. ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ:05.11.2024 (ಕಂಡಿಕೆ-10)

* * * * *

ಪ್ರಸ್ತಾವನೆ:

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, **ಸ್ಕೂಲ್ ವ್ಯವಸ್ಥೆಯು** ಇತ್ತೀಚಿನ ದಿನಗಳಲ್ಲಿ ವಿಶ್ವಾದ್ಯಂತ ವಿಶ್ವವಿದ್ಯಾನಿಲಯಗಳಲ್ಲಿ ತುಂಬಾ ಪ್ರಚಲಿತವಾಗಿದೆ. ಈ ವ್ಯವಸ್ಥೆಯಲ್ಲಿ ಪರಸ್ಪರ ಸಂಬಂಧವಿರುವ ಹಲವು ಸ್ನಾತಕೋತ್ತರ ವಿಭಾಗಗಳನ್ನು ಒಟ್ಟುಗೂಡಿಸಿ ಏಕಶಿಸ್ತೀಯ ಅಧ್ಯಯನದ ಜೊತೆಗೆ ಅಂತರ್/ಬಹುಶಿಸ್ತೀಯ ಅಧ್ಯಯನಗಳನ್ನು ಮಾಡಬಹುದಾಗಿದೆ. ಇತ್ತೀಚಿನ ದಿನಗಳಲ್ಲಿ ಅಂತರ್/ಬಹುಶಿಸ್ತೀಯ ಅಧ್ಯಯನಗಳು ಹೆಚ್ಚಾಗಿ ನಡೆಯುತ್ತಿದ್ದು, ಸ್ಕೂಲ್ ವ್ಯವಸ್ಥೆ ಪರಿಣಾಮಕಾರಿಯಾಗಲು ಯಾವುದೇ ಒಂದು ಹೊಸ ಅಧ್ಯಯನ ಕ್ಷೇತ್ರ ಹೊರಹೊಮ್ಮಿದಾಗ ಅದನ್ನು ತಕ್ಷಣವೇ ವಿಶ್ವವಿದ್ಯಾನಿಲಯದಲ್ಲಿ ಅಳವಡಿಸಿಕೊಂಡು ಅಧ್ಯಯನ ಮಾಡಲು ಸ್ಕೂಲ್ ಪರಿಕಲ್ಪನೆ ಸಹಕಾರಿಯಾಗುತ್ತದೆ. ಸ್ಕೂಲ್ ವ್ಯವಸ್ಥೆಯಿಂದ ಸ್ನಾತಕೋತ್ತರ ವಿಭಾಗಗಳ ನಿರ್ವಹಣೆಯೂ ಸಹ ಸುಲಭವಾಗುತ್ತದೆ. ಸ್ಕೂಲ್ ವ್ಯವಸ್ಥೆಗೆ ಮಾರ್ಪಾಡು ಹೊಂದುವುದರಿಂದ ಸಾಂಸ್ಥಿಕ ರಚನೆ ವಿಕೇಂದ್ರೀಕರಣ, ಕೌಶಲ್ಯ ತರಬೇತಿಗೆ ಒತ್ತು ನೀಡುವುದು, ಸಂಪನ್ಮೂಲಗಳ ಅತ್ಯುತ್ತಮ ಬಳಕೆ, ಉದ್ಯಮಗಳೊಂದಿಗೆ ಉತ್ತಮ ಸಂವಹನ, ಕೋರ್ಸ್ ಪಠ್ಯಕ್ರಮದಲ್ಲಿ ನಾವೀನ್ಯತೆ ಮುಂತಾದವುಗಳನ್ನು ಸಾಧಿಸಬಹುದಾಗಿದೆ. ಪ್ರತಿ ಸ್ಕೂಲ್‌ಗೆ ಒಬ್ಬರು ನಿರ್ದೇಶಕರನ್ನು ಎರಡು ವರ್ಷದ ಅವಧಿಗೆ ನೇಮಿಸಲಾಗುವುದು ಈ ಕುರಿತಂತೆ ವಿಶ್ವವಿದ್ಯಾನಿಲಯ ಮಟ್ಟದಲ್ಲಿ ಸ್ಕೂಲ್ ಪರಿಕಲ್ಪನೆಯನ್ನು ಅನುಷ್ಠಾನಗೊಳಿಸುವ ಸಂಬಂಧ ಉಲ್ಲೇಖ(1) ಸಕ್ಷಮ ಪ್ರಾಧಿಕಾರಗಳ ನಿರ್ಣಯ ಹಾಗೂ ಉಲ್ಲೇಖ(03) ರ ಮಾನ್ಯ ಕುಲಪತಿಯವರ ಅನುಮೋದನೆಯ ಮೇರೆಗೆ ಈ ಕೆಳಕಂಡಂತೆ ಅಧಿಸೂಚನೆ ಹೊರಡಿಸಲಾಗಿದೆ.

ಸಂಖ್ಯೆ:ತುವಿ:ಶೈವಿ:PG:2024-25/2813 ದಿನಾಂಕ:04.11.2024

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ತುಮಕೂರು ವಿಶ್ವವಿದ್ಯಾನಿಲಯ ಸ್ನಾತಕೋತ್ತರ ಮಟ್ಟದಲ್ಲಿ ಸ್ಕೂಲ್ ಪರಿಕಲ್ಪನೆಗಳನ್ನು ಅನುಷ್ಠಾನಗೊಳಿಸುವ ಕುರಿತಂತೆ ಈ ಕೆಳಕಂಡ ವಿಷಯಗಳನ್ನು ವಿಶ್ವವಿದ್ಯಾನಿಲಯದಲ್ಲಿ ಅಳವಡಿಸಿಕೊಳ್ಳಲು ಸೂಚಿಸಲಾಗಿದೆ.

1. School of Natural Sciences
2. School of Physical Sciences
3. School of Chemical Sciences
4. School of Earth Sciences and Environmental Sciences
5. School of Commerce and Management
6. School of Literature & Cultural Studies
7. School of Humanities/ Social Sciences
8. School of Information Technologies
9. School of Education
10. School of Law

ಆದೇಶದ ಮೇರೆಗೆ

ಉಪಕುಲಸಚಿವರು

ಉಪಕುಲಸಚಿವರು
ಶೈಕ್ಷಣಿಕ ವಿಭಾಗ
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಪು.ತಿ.ನೋ

ಗೆ.

1. ಅಧ್ಯಕ್ಷರು, ಎಲ್ಲಾ ಸ್ನಾತಕೋತ್ತರ ವಿಭಾಗಗಳ ಅಧ್ಯಯನ ಮಂಡಳಿ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು-ತಮ್ಮ ಅಧೀನದಲ್ಲಿ ಬರುವ ಎಲ್ಲಾ ಸಿಬ್ಬಂದಿಗಳ ಗಮನಕ್ಕೆ ತರುವುದು.
2. ಅಧ್ಯಕ್ಷರು/ಸಂಯೋಜಕರು, ಎಲ್ಲಾ ಸ್ನಾತಕೋತ್ತರ ಅಧ್ಯಯನ & ಸಂಶೋಧನಾ ವಿಭಾಗಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು-ತಮ್ಮ ಅಧೀನದಲ್ಲಿ ಬರುವ ಎಲ್ಲಾ ಸಿಬ್ಬಂದಿಗಳ ಗಮನಕ್ಕೆ ತರುವುದು
3. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ವ್ಯಾಪ್ತಿಯ ಘಟಕ ಹಾಗೂ ಸಂಯೋಜಿತ ಸ್ನಾತಕೋತ್ತರ ಪದವಿ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

ಪ್ರತಿಗಳು:

1. ಕುಲಸಚಿವರು (ಪರೀಕ್ಷಾಂಗ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಎಲ್ಲಾ ವಿಭಾಗಗಳ ಉಪಕುಲಸಚಿವರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
4. ಸಿಸ್ಟಂ ಅನಾಲಿಸ್ಟ್, ತುಮಕೂರು-ವಿಶ್ವವಿದ್ಯಾನಿಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು ಹಾಗೂ ಇ-ಮೇಲ್ ಮುಖಾಂತರ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಕಳುಹಿಸುವುದು.
5. ಕಚೇರಿ ಪ್ರತಿ.